# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ. ಅಯೂಬ್ ಖಾನ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗಿಡ್ಡಪ್ಪನಹಳ್ಳಿ ಗ್ರಾಂ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ. ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ – ಅಂತಿಮ ಆದೇಶ ಹೊರಡಿಸುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/409/ಗ್ರಾಪಂಕಾ/2016, ಬೆಂಗಳೂರು, ದಿನಾಂಕ:12–08–2016.
2. ಅಪರ ನಿಬಂಧಕರು ವಿಚಾರಣೆಗಳು–8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-2/DE-464/2016/ARE-8,_ ದಿನಾಂಕ:28.05.2018.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE-464/2016/ARE-8,_ ದಿನಾಂಕ:30.05.2018
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ/409/ಗ್ರಾಪಂಕಾ/2016, ದಿನಾಂಕ:12.06.2018.
5. ಶ್ರೀ. ಅಯೂಬ್ ಖಾನ್, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 31.07.2018.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ. ಅಯೂಬ್ ಖಾನ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗಿಡ್ಡಪ್ಪನಹಳ್ಳಿ ಗ್ರಾಂ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ. ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14–ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು–8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ":

"ಶ್ರೀ. ಆಯೂಬ್ ಖಾನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗಿಡ್ಡಪ್ಪನಹಳ್ಳಿ ಗ್ರಾಮ ಪಂಚಾಯಿತಿ, (ಪ್ರಸ್ತುತ ಲಕ್ಕೊಂಡಹಳ್ಳಿ ಗ್ರಾಮ ಪಂಚಾಯಿತಿ), ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ – ಆಪಾದಿತ ಸರ್ಕಾರಿ ನೌಕರರಾದ ನೀವು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನ ಗಿಡ್ಡಪ್ಪನಹಳ್ಳಿ ಗ್ರಾಮದಲ್ಲಿ ಸಾರ್ವಜನಿಕ ರಸ್ತೆಯನ್ನು ಸಂಪೂರ್ಣವಾಗಿ ಅಲ್ಲಿನ ನಿವಾಸಿಗಳ ಒತ್ತುವರಿ ಮಾಡಿದ್ದು, ಅದನ್ನು ತೆರವುಗೊಳಿಸಲು ದೂರುದಾರರು ಅನೇಕ ಬಾರಿ ಅರ್ಜಿ ಕೊಟ್ಟಿದ್ದರೂ ಸಹ ನೀವು ಯಾವುದೇ ಸೂಕ್ತ ಕ್ರಮ ಕೈಗೊಳ್ಳದೇ ಕರ್ತವ್ಯದಲ್ಲಿ ನಿರ್ಲಕ್ಷ್ಯತನ ತೋರಿಸಿರುತ್ತೀರಿ. ಆದಕಾರಣ ಸರ್ಕಾರಿ ಆಪಾದಿತ ನೌಕರರಾದ ನೀವು ಸರ್ಕಾರಿ ಸೇವಕರಾಗಿದ್ದು, ನಿಮ್ಮ ಕರ್ತವ್ಯಪಾಲನೆಯಲ್ಲಿ ಪರಿಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೆ, ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು,

ನೀವು ಕರ್ನಾಟಕ ಸರ್ಕಾರಿ ಸೇವಾ (ಸದ್ವರ್ತನೆ) ನಿಯಮಾವಳಿ 1966 ರ (3)(1)(i) ಮತ್ತು (ii)ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿದ್ದೀರಿ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ. ಅಯೂಬ್ ಖಾನ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗಿಡ್ಡಪ್ಪನಹಳ್ಳಿ ಗ್ರಾಂ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ. ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಸದರಿಯವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ "ಅವರ ಕಾಲಿಕ ವೇತನ ಶ್ರೇಣಿಯಲ್ಲಿ ವೇತನವನ್ನು ಎರಡು ಹಂತ ಶಾಶ್ವತವಾಗಿ ಕೆಳಗಿಳಿಸುವ" ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ. ಅಯೂಬ್ ಖಾನ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗಿಡ್ಡಪ್ಪನಹಳ್ಳಿ ಗ್ರಾಂ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ. ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (4) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಅವರು ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರು ಸರ್ಕಾರದ 2ನೇ ಕಾರಣ ಕೇಳುವ ನೋಟಿಸಿಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

- ನಾನು ದಿನಾಂಕ:21-08-2014 ರಿಂದ 28-01-2015 ರವರೆಗೆ, ಅಂದರೆ ಕೇವಲ 5 ತಿಂಗಳು ಮಾತ್ರ ಗಿಡ್ಡಪ್ಪನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.
- ಶ್ರೀ ರಘುನಾಥ್ ಎಸ್.ಎಂ. ಬಿನ್ ಮುನಿರಾಜು, ಸಿದ್ದೇನಹಳ್ಳಿ ಗ್ರಾಮವಾಸಿ ಇವರು, ತಮ್ಮ ಊರು ಸಿದ್ದೇನಹಳ್ಳಿಯಲ್ಲಿರುವ ಸಾರ್ವಜನಿಕ ಕುಂಟೆಯ ದಕ್ಷಿಣ ಭಾಗಕ್ಕೆ ರಸ್ತೆಯು ಒತ್ತುವರಿಯಾಗಿದೆ ಎಂದು ದಿನಾಂಕ: 23-01-2015 ರಂದು ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ಆಪಾದನೆಯ ಸಮರ್ಥನೆಯ ಸಂಬಂಧಪಟ್ಟ ಯಾವುದೇ ದಾಖಲೆ, ಸಾಕ್ಷ್ಯ ಪುರಾವೆಗಳಿಲ್ಲದೆ ದುರುದ್ದೇಶದಿಂದ ನನ್ನ ಮೇಲೆ ಸುಳ್ಳು ದೂರನ್ನು ನೀಡಿರುತ್ತಾರೆ.
- ಆದರೆ, ಮಾನ್ಯ ಉಪಲೋಕಾಯುಕ್ತ-2 ರವರು ಈ ಬಗ್ಗೆ ತಮ್ಮ ಸಂಸ್ಥೆಯಿಂದ ತನಿಖಾಧಿಕಾರಿಯನ್ನು ನೇಮಿಸಿ ಸ್ಥಳ ಪರಿಶೀಲನೆ ನಡೆಸಿ ಸಿದ್ದೇನಹಳ್ಳಿಯಲ್ಲಿರುವ ಸಾರ್ವಜನಿಕ ಕುಂಟೆಯ ದಕ್ಷಿಣ ಭಾಗಕ್ಕಿರುವ ರಸ್ತೆಯು ಒತ್ತುವರಿಯಾಗಿದೆಯೋ ಇಲ್ಲವೋ ಎಂಬುದನ್ನು ಖಾತ್ರಿಪಡಿಸಿಕೊಳ್ಳಲು ವರದಿಯನ್ನು ಪಡೆದು ಮುಂದಿನ ಕ್ರಮವಹಿಸಬಹುದಾಗಿತ್ತು. ಆದರೆ ದೂರುದಾರರ ಸಾಕ್ಷ್ಯರಹಿತ ಸುಳ್ಳು ಆಪಾದನೆಯ ಮೇಲೆ ನನ್ನ ವಿರುದ್ಧ ಶಿಸ್ತು ಕ್ರಮವಹಿಸಲು ಶಿಫಾರಸ್ಸು ಮಾಡುವ ವರದಿಯನ್ನು ದಿನಾಂಕ: 01.07.2016 ರಂದು ಸರ್ಕಾರಕ್ಕೆ ಕಳುಹಿಸಿರುತ್ತಾರೆ.
- ಸರ್ಕಾರದ ಆದೇಶ ದಿನಾಂಕ: 12.08.2016 ರನ್ವಯ ನನ್ನ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಶಿಸ್ತು ಪ್ರಾಧಿಕಾರದ ಪರವಾಗಿ ಮಾನ್ಯ ಅಪರ ನಿಬಂಧಕರು (ವಿಚಾರಣೆ-8) ಕರ್ನಾಟಕ ಲೋಕಾಯುಕ್ತ ರವರು ದಿನಾಂಕ: 27.02.2017 ರಂದು ಜಾರಿಗೊಳಿಸಿರುತ್ತಾರೆ. ಆದರೆ, ಈ ದೋಷಾರೋಪಣಾ ಪಟ್ಟಿಯಲ್ಲಿ ಗಿಡ್ಡಪ್ಪನಹಳ್ಳಿ ಗ್ರಾಮದಲ್ಲಿರುವ ಸಾರ್ವಜನಿಕ ಕುಂಟೆಯ ದಕ್ಷಿಣ ಭಾಗದ ರಸ್ತೆಯನ್ನು ಅಲ್ಲಿನ ನಿವಾಸಿಗಳು ಒತ್ತುವರಿ ಮಾಡಿದ್ದು, ಅದನ್ನು ತೆರವುಗೊಳಿಸಲು ಯಾವುದೇ ಕ್ರಮವಹಿಸದೇ ಕರ್ತವ್ಯಲೋಪ ಎಸಗಿರುತ್ತೇನೆ ಎಂದು ನನ್ನ ವಿರುದ್ಧ ಛಾರ್ಜ್ ಮಾಡಲಾಗಿರುತ್ತದೆ.
- ದಿನಾಂಕ: 27.02.2017 ರ ದೋಷಾರೋಪಣಾ ಪಟ್ಟಿಯ ಅನುಬಂಧ-1 ಮತ್ತು 2 ರಲ್ಲಿ ಗಿಡ್ಡಪ್ಪನಹಳ್ಳಿ ಗ್ರಾಮದಲ್ಲಿರುವ ಸಾರ್ವಜನಿಕ ಕುಂಟೆಯ ದಕ್ಷಿಣ ಭಾಗಕ್ಕಿರುವ ರಸ್ತೆಯನ್ನು ಒತ್ತುವರಿ ಮಾಡಲಾಗಿದೆ ಎಂದು ನನ್ನ ವಿರುದ್ಧ ತಪ್ಪು ದೋಷಾರೋಪಣೆಯನ್ನು ಮಾಡಲಾಗಿರುತ್ತದೆ. ದೂರುದಾರರ ಆಪಾದನೆ

ಸಿದ್ದೇನಹಳ್ಳಿಯಲ್ಲಿರುವ ಸಾರ್ವಜನಿಕ ಕುಂಟೆಯ ಪ್ರಸ್ತಾಪ ಇರುವುದಿಲ್ಲ. ಆದ್ದರಿಂದ ನನ್ನ ಮೇಲೆ ತಪ್ಪು ದೋಷಾರೋಪಣೆಯನ್ನು ಮಾಡಿದ್ದು, ಇದು ಆಧಾರ ರಹಿತವಾದುದ್ದು ಹಾಗೂ ಸತ್ಯಕ್ಕೆ ದೂರವಾದ್ದುದ್ದು. ಈ ಅಂಶವನ್ನು ನನ್ನ ಪರವಾದ ವಾದದಲ್ಲಿ ಸಲ್ಲಿಸಿರುತ್ತೇನೆ. ಆದರೆ, ಈ ಬಗ್ಗೆ ಮಾನ್ಯ ವಿಚಾರಣಾ ಅಧಿಕಾರಿಗಳು ಇದನ್ನು ಅಲ್ಲಗೆಳೆದಿರುವುದಿಲ್ಲ ಹಾಗೂ ಈ ಬಗ್ಗೆ ಯಾವುದೇ ಪ್ರಸ್ತಾಪ ಮಾಡಿರುವುದಿಲ್ಲ.

- ಇಲಾಖಾ ವಿಚಾರಣೆಯಲ್ಲಿ ಶಿಸ್ತು ಪ್ರಾಧಿಕಾರದ ಪರವಾಗಿ ದೂರುದಾರರೊಬ್ಬರು ಮಾತ್ರ ಸಾಕ್ಷಿಯಾಗಿದ್ದು, (ಪಿ.ಡಬ್ಲೂ-1) (ವಯಸ್ಸು-37 ವರ್ಷಗಳು) ಅವರು ನುಡಿದ ಸಾಕ್ಷ್ಯದಲ್ಲಿ ಅವರ ಗ್ರಾಮ ಸಿದ್ದೇನಹಳ್ಳಿಯಲ್ಲಿರುವ ಸಾರ್ವಜನಿಕ ಕುಂಟೆಯ ದಕ್ಷಿಣ ಭಾಗಕ್ಕಿರುವ ರಸ್ತೆಯನ್ನು ಅಲ್ಲಿನ ನಿವಾಸಿಗಳು ಒತ್ತುವರಿ ಆಗಿತ್ತು ಎಂದು ಹಾಗೂ ಅದಕ್ಕೆ ಅವರು ಯಾವುದೇ ದಾಖಲೆಗಳನ್ನು ಕೊಟ್ಟಿಲ್ಲ, ಆಪಾದಿತ ಸರ್ಕಾರಿ ನೌಕರರ ಕರ್ತವ್ಯದ ಅವಧಿಯಲ್ಲಿ ಯಾವುದೇ ಒತ್ತುವರಿ ಆಗಿಲ್ಲ ಎಂದು ಹೇಳಿರುತ್ತಾರೆ. ದೂರನ್ನು ಬಿಟ್ಟರೆ ಇನ್ಯಾವುದೇ ದಾಖಲೆಗಳ ಸಾಕ್ಷ್ಯವಿರುವುದಿಲ್ಲ.
- ಅದರಂತೆ ದೋಷಾರೋಪಣಾ ಪಟ್ಟಿಯಲ್ಲಿ ನಮೂದಿಸಿರುವಂತೆ ಗಿಡ್ಡಪ್ಪನಹಳ್ಳಿ ಗ್ರಾಮದಲ್ಲಿನ ಸಾರ್ವಜನಿಕ ಕುಂಟೆಯ ದಕ್ಷಿಣ ಭಾಗಕ್ಕಿರುವ ರಸ್ತೆಯು ಒತ್ತುವರಿಯಾಗಿದೆ ಎಂಬುದಕ್ಕೆ ಯಾವುದೇ ದೂರು, ಆಪಾದನೆ, ಸಾಕ್ಷ್ಯ ಮತ್ತು ದಾಖಲೆಗಳು ಇಲ್ಲದಿದ್ದು; ನನ್ನ ಮೇಲೆ ಆಧಾರರಹಿತವಾದ, ಸಾಕ್ಷ್ಯವಿಲ್ಲದ, ನಿಶ್ಚಿತವಾಗಿಲ್ಲದ ದೋಷಾರೋಪಣೆಯನ್ನು ಮಾಡಲ್ಪಾಗಿದೆ. ಆದ್ದರಿಂದ, ಸದರಿ ವಿಚಾರಣೆಯು ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957, 11(3)ನೇ ನಿಯಮವನ್ನು ಉಲ್ಲಂಘನೆ ಮಾಡಿದಂತಾಗಿದೆ. ಹಾಗೂ ಇದು ನ್ಯಾಯಶಾಸ್ತ್ರದ ನಿಯಮಗಳ ಹಾಗೂ ಸಹಜ ನ್ಯಾಯದ ಉಲ್ಲಂಘನೆಯಾಗಿದೆ.
- ಇನ್ನೂ ಪ್ರಕರಣದ ಸತ್ಯಾಸತ್ಯತೆ ಬಗ್ಗೆ ಹೇಳುವುದಾದರೆ, ಗಿಡ್ಡಪ್ಪನಹಳ್ಳಿ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ದಿನಾಂಕ: 10.11.2014 ರಂದು ದೂರುದಾರರ ನೀಡಿದ ದೂರಿನ ಬಗ್ಗೆ ಕ್ರಮವಹಿಸಿ, ದಿನಾಂಕ: 22.11.2014 ರಂದು ಗ್ರಾಮ ಪಂಚಾಯಿತಿಯ ಅಧ್ಯಕ್ಷರು, ಪಂಚಾಯಿತಿ ಸದಸ್ಯರು, ಸಿದ್ದೇನಹಳ್ಳಿ ಗ್ರಾಮಸ್ಥರು ಸಮಕ್ಷಮದಲ್ಲಿ ಸಿದ್ದೇನಹಳ್ಳಿಯಲ್ಲಿರುವ ಸಾರ್ವಜನಿಕ ಕುಂಟೆಯ ಸ್ಥಳ ಪರಿಶೀಲಿನ ನಡೆಸಿರುತ್ತಾನೆ. ಈ ಸ್ಥಳ ಪರಿಶೀಲನೆ ಸಮಯದಲ್ಲಿ ಈ ಕುಂಟೆಯು ಹಲವಾರು ವರ್ಷಗಳಿಂದ ಹೇಗಿತ್ತೋ ಹಾಗೆಯೇ ಇದ್ದು, ದೂರುದಾರರು ತಿಳಿಸಿರುವಂತೆ ಕುಂಟೆಯ ದಕ್ಷಿಣ ಭಾಗದಲ್ಲಿ ಯಾವುದೇ ಒತ್ತುವರಿಯಾಗಿರುವುದು ಕಂಡುಬಂದಿರಲಿಲ್ಲ. ಈ ವಿಷಯವನ್ನು ಅಂದು ಬರೆದ ಸ್ಥಳ ಮಹಜರ್‌ನಲ್ಲಿ ನಮೂದಿಸಿರುತ್ತೇನೆ. ಈ ವಿಷಯವನ್ನು ನನ್ನ ಪರವಾದ ಸಾಕ್ಷ್ಯದಲ್ಲಿ ನುಡಿದಿರುತ್ತೇನೆ ಮತ್ತು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ,
- ದೂರಿನಲ್ಲಿ ಮಾಡಿರುವ ಆಪಾದನೆಯಂತೆ ಸಿದ್ದೇನಹಳ್ಳಿಯಲ್ಲಿರುವ ಈ ಕುಂಟೆಯ ದಕ್ಷಿಣ ಭಾಗಕ್ಕಿರುವ ಸಾರ್ವಜನಿಕ ರಸ್ತೆಯನ್ನು ಅಲ್ಲಿನವರು ಒತ್ತುವರಿ ಮಾಡಿಕೊಂಡಿದ್ದಾರೆ ಎಂಬುದಕ್ಕೆ ದೂರಿನಜೊತೆ ಯಾವುದೇ ದಾಖಲೆಗಳನ್ನು ದೂರುದಾರರು ನೀಡಿರುವುದಿಲ್ಲ ಮತ್ತು ಗ್ರಾಮಪಂಚಾಯಿತಿಯಲ್ಲಿ ಈ ಬಗ್ಗೆ ಯಾವುದೇ ದಾಖಲೆಗಳು ಕಂಡುಬಂದಿರುವುದಿಲ್ಲ.
- ನಾನು ಮಾಡಿದ ಸ್ಥಳ ಪರಿಶೀಲನೆ ಸಮಯದಲ್ಲಿ ಒತ್ತುವರಿಯ ಬಗ್ಗೆ ಯಾವುದೇ ಸಾಕ್ಷ್ಯಗಳು ಕಂಡುಬಂದಿಲ್ಲವಾದ್ದರಿಂದ ಗ್ರಾಮ ಪಂಚಾಯಿತಿಯ ಸಭೆಯಲ್ಲಿ ಈ ಬಗ್ಗೆ ಮೋಜಿಣಿ ಮಾಡಿಸುವ, ಒತ್ತುವರಿದಾರರಿಗೆ ನೋಟೀಸ್ ನೀಡಿ ಅವರನ್ನು ಅಲ್ಲಿಂದ ತೆರವುಗೋಲಿಸುವ ಕ್ರಮ ಕೈಗೊಳ್ಳುವ ಪ್ರಸ್ತಾಪ ಬರಲಿಲ್ಲ. ಗಿಡ್ಡಪ್ಪನಹಳ್ಳಿ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಕಾರ್ಯಗಳನ್ನು ನನ್ನ ಕರ್ತವ್ಯದ ಅವಧಿಯಲ್ಲಿ (5 ತಿಂಗಳು ಮಾತ್ರ) ನಾನು ನಿಯಮಾನುಸಾರ ಕೈಗೊಂಡು ಯಾವುದೇ ಲೋಪವಿಲ್ಲದೆ ಅನುಷ್ಠಾನಗೊಳಿಸಿರುತ್ತೇನೆ ಎಂಬ ವಿವರಗಳು ಸವಿಸ್ತಾರವಾಗಿ ನನ್ನ ಪರವಾದ ಸಾಕ್ಷ್ಯದಲ್ಲಿ ಬಂದಿರುತ್ತದೆ.
- ಆದರೆ ವಿಚಾರಣಾಧಿಕಾರಿಗಳು ನನ್ನ ವಿರುದ್ಧ ಮಾಡಲಾದ ದೋಷಾರೋಪಣೆಯನ್ನು ರುಜುವಾತಪಡಿಸುವ ಯಾವುದೇ ಬಲವಾದ ಸಾಕ್ಷ್ಯಗಳು ಇಲ್ಲದಿದ್ದರೂ ಸಹಾ ಹಾಗೂ ನಾನು ಯಾವುದೇ ಕರ್ತವ್ಯ ಲೋಪ, ದುರ್ನಡತೆ ಮತ್ತು ನಿಯಮಗಳ ಉಲ್ಲಂಘನೆ ಮಾಡಿರುವುದಿಲ್ಲ ಮತ್ತು

ನಿಷ್ಠೆಯಿಂದ ನಿಯಮಾನುಸಾರ ಕರ್ತವ್ಯ ನಿರ್ವಹಿಸಿರುತ್ತೇನೆ ಎಂಬ ಬಗ್ಗೆ ಸಾಕ್ಷ್ಯಗಳನ್ನು, ವಾದವನ್ನು ಮಂಡಿಸಿದ್ದರು, ಇವುಗಳನ್ನು ಪರಿಗಣನೆಗೆ ತೆಗೆದುಕೊಳ್ಳದೆ, ನನ್ನ ವೇತನದಲ್ಲಿ ಎರಡು ಹಂತವನ್ನು ಕಡಿತಗೊಳಿಸುವ ದಂಡನೆಗೆ ಶಿಫಾರಸ್ಸು ಮಾಡಿರುವುದು ನ್ಯಾಯಸಮ್ಮತವಲ್ಲವೆಂದು ಇದನ್ನು ಕೈಬಿಡಬೇಕೆಂದು ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತು ಪಡಿಸಲು ಪ್ರಮುಖವಾಗಿ ವರದಿಯಲ್ಲಿ ಮೇಲ್ಕಂಡ ಅಂಶಗಳನ್ನು ಅಲ್ಲಗಳೆಯಲು ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ. ಅವುಗಳ ಸಂಕ್ಷಿಪ್ತ ಸಾರಾಂಶ ಈ ಕೆಳಗಿನಂತಿದೆ.

"ಶ್ರೀ. ಆಯೂಬ್ ಖಾನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗಿಡ್ಡಪ್ಪನಹಳ್ಳಿ ಗ್ರಾಮ ಪಂಚಾಯಿತಿ, (ಪ್ರಸ್ತುತ ಲಕ್ಕೊಂಡಹಳ್ಳಿ ಗ್ರಾಮ ಪಂಚಾಯಿತಿ), ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ – ಆಪಾದಿತ ಸರ್ಕಾರಿ ನೌಕರರಾದ ನೀವು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನ ಗಿಡ್ಡಪ್ಪನಹಳ್ಳಿ ಗ್ರಾಮದಲ್ಲಿ ಸಾರ್ವಜನಿಕ ರಸ್ತೆಯನ್ನು ಸಂಪೂರ್ಣವಾಗಿ ಅಲ್ಲಿನ ನಿವಾಸಿಗಳ ಒತ್ತುವರಿ ಮಾಡಿದ್ದು, ಅದನ್ನು ತೆರವುಗೊಳಿಸಲು ದೂರುದಾರರು ಅನೇಕ ಬಾರಿ ಅರ್ಜಿ ಕೊಟ್ಟಿದ್ದರೂ ಸಹ ನೀವು ಯಾವುದೇ ಸೂಕ್ತ ಕ್ರಮ ಕೈಗೊಳ್ಳದೇ ಕರ್ತವ್ಯದಲ್ಲಿ ನಿರ್ಲಕ್ಷ್ಯತನ ತೋರಿಸಿರುತ್ತೀರಿ. ಆದಕಾರಣ ಸರ್ಕಾರಿ ಆಪಾದಿತ ನೌಕರರಾದ ನೀವು ಸರ್ಕಾರಿ ಸೇವಕರಾಗಿದ್ದು, ನಿಮ್ಮ ಕರ್ತವ್ಯಪಾಲನೆಯಲ್ಲಿ ಪರಿಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೆ, ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು, ನೀವು ಕರ್ನಾಟಕ ಸರ್ಕಾರಿ ಸೇವಾ (ಸದ್ವರ್ತನೆ) ನಿಯಮಾವಳಿ 1966 ರ (3)(1)(i) ಮತ್ತು (ii)ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿದ್ದೀರಿ."

ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀವ್ರತೆಗೆ ಅನುಗುಣವಾಗಿ ಶ್ರೀ. ಅಯೂಬ್ ಖಾನ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗಿಡ್ಡಪ್ಪನಹಳ್ಳಿ ಗ್ರಾಂ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ರವರಿಗೆ **"ಇವರ ಕಾಲಿಕ ವೇತನ ಶ್ರೇಣಿಯಲ್ಲಿ ವೇತನವನ್ನು ಎರಡು ಹಂತ ಶಾಶ್ವತವಾಗಿ ಕೆಳಗಿಳಿಸುವ"** ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ. ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/409/ಗ್ರಾಪಂಕಾ/2018, ಬೆಂಗಳೂರು, ದಿನಾಂಕ:11-10-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ. ಅಯೂಬ್ ಖಾನ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗಿಡ್ಡಪ್ಪನಹಳ್ಳಿ ಗ್ರಾಂ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ. ಇವರಿಗೆ "ಇವರ ಕಾಲಿಕ ವೇತನ ಶ್ರೇಣಿಯಲ್ಲಿ ವೇತನವನ್ನು ಎರಡು ಹಂತ ಶಾಶ್ವತವಾಗಿ ಕೆಳಗಿಳಿಸುವ" ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

11/10

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ಅಪರ ನಿಬಂಧಕರು, ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
7. ಶ್ರೀ. ಅಯೂಬ್ ಖಾನ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗಿಡ್ಡಪ್ಪನಹಳ್ಳಿ ಗ್ರಾಮ ಪಂಚಾಯಿತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ.